# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 01.07.2011**

ಕರ್ನಾಟಕದ ಘನ ಉಚ್ಛ ನ್ಯಾಯಾಲಯದ ಆದೇಶದಂತೆ ಇಂದು ಭುವನೇಶ್ವರಿನಗರದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಕಟ್ಟಡವನ್ನು ಹಾಗೂ ಕಮ್ಮಗೊಂಡನಹಳ್ಳಿಯಲ್ಲಿ ಬೃಹತ್ ನೀರುಗಾಲುವೆ ಒತ್ತುವರಿ ಮಾಡಿಕೊಂಡಿರುವುದನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾರ್ಯಾಚರಣೆ ನಡೆಸಿ ತೆರವುಗೊಳಿಸಿದೆ.

ದಕ್ಷಿಣ ವಲಯ ವ್ಯಾಪ್ತಿಯ ಭುವನೇಶ್ವರಿನಗರದಲ್ಲಿ ಅರುಣೋದಯ ಕಲ್ಯಾಣ ಮಂಟಪದ ಎದುರುಗಡೆ ಅನಧಿಕೃತವಾಗಿ ನಿರ್ಮಿಸಲಾದ ಎರಡು ಅಂತಸ್ತಿನ ಕಟ್ಟಡದ ಸಂಖ್ಯೆ: 9 ಅನ್ನು ತೆರವುಗೊಳಿಸಲಾಯಿತು.

ವಾರ್ಡ್ ನಂ.12ರ ವ್ಯಾಪ್ತಿಯ ಜಾಲಹಳ್ಳಿ ಪಶ್ಚಿಮದ ಕಮ್ಮಗೊಂಡನಹಳ್ಳಿಯಲ್ಲಿ ಅನಧಿಕೃತವಾಗಿ ರಾಜಕಾಲುವೆ ಒತ್ತುವರಿ ಮಾಡಿಕೊಂಡಿದ್ದು, ಸುಮಾರು 50 ಮೀಟರ್ ಉದ್ದದ ಚರಂಡಿಯಲ್ಲಿ ಒಟ್ಟು 18 ಒತ್ತುವರಿಗಳನ್ನು ತೆರವುಗೊಳಿಸಲಾಯಿತು ಎಂದು ಕಾರ್ಯಪಾಲಕ ಅಭಿಯಂತರರು (ಒತ್ತುವರಿ ತೆರವು) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 01.07.2011**

## ***ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸರ್ವಜ್ಞನಗರ ವಿಭಾಗದಲ್ಲಿ ದಿನಾಂಕ: 02.07.2011 ರಂದು ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.49, ಲಿಂಗರಾಜಪುರ ವಾರ್ಡ್‌ನಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಕಾಮಗಾರಿ ಇಲಾಖೆಯ ಎಲ್ಲಾ ಅಭಿಯಂತರರು, ಕೆಲಸ ಪರಿವೀಕ್ಷಕರು, ಗ್ಯಾಂಗ್‌ಮೆನ್, ಪರಿಸರ ಇಲಾಖೆಯ ಅಭಿಯಂತರರು ಹಾಗೂ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಕರು, ಪೌರಕಾರ್ಮಿಕರುಗಳು ಭಾಗವಹಿಸಲಿದ್ದಾರೆ ಎಂದು ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**